24. ಶ್ರೀ ಚವಾಣ್

25. ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್

26. ಶ್ರೀ ಎಂ. ಶಿವಣ್ಣ

27. ಶ್ರೀ ಕುಮಾರ್ ಬಂಗಾರಪ್ಪ

28. ಶ್ರೀ ಎಂ. ಮಲ್ಲಿಕಾರ್ಜುನ್ ನಾಗಪ್ಪ

29. ಶ್ರೀ ಎಂ.ಎಂ. ನಾಣಯ್ಯ

30. ಶ್ರೀ ಟಿ. ಜಾನ್

31. ಪ್ರೊ. ಬಿ.ಕೆ. ಚಂದ್ರಶೇಖರ್

ಈ ಎಲ್ಲಾ ಮಂತ್ರಿಮಂಡಲದ ಸದಸ್ಯರ ಪರಿಚಯವನ್ನು ಮಾಡಿಕೊಡಲು ಅನುವು ಮಾಡಿಕೊಟ್ಟ ಮಾನ್ಯ ಅಧ್ಯಕ್ಷರಿಗೆ ನನ್ನ ಧನ್ಯವಾದಗಳು.

6. ಮಾನ್ಯ ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದಂತೆ ವಂದನಾ ನಿರ್ಣಯದ ಮಂಡನೆ

ಅಧ್ಯಕ್ಷರು:- ಈಗ ಮಾನ್ಯ ರಾಜ್ಯಪಾಲರ ಭಾಷಣಕ್ಕೆ ಸಲ್ಲಿಸತಕ್ಕ ವಂದನಾ ನಿರ್ಣಯದ ಮಂಡನೆ.

ಶ್ರೀ ಎಸ್.ಜೆ. ನಂಜಯ್ಯನಮಠ್ (ಗುಳೇದಗುಡ್ಡ) :- ಮಾನ್ಯ ಅಧ್ಯಕ್ಷರೆ, ನಾನು ಈ ಕೆಳಕಂಡ ಪ್ರಸ್ತಾಪವನ್ನು ಈ ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

"ದಿನಾಂಕ 27-10-1999 ರಂದು ವಿಧಾನ ಮಂಡಲದ ಸದಸ್ಯರನ್ನುದ್ದೇಶಿಸಿ ಮಾನ್ಯ ರಾಜ್ಯಪಾಲರು ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಸಭೆ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸುತ್ತೇವೆ"

ಶ್ರೀ ಯು.ಆರ್. ಸಭಾಪತಿ(ಉಡುಪಿ):- ಮಾನ್ಯ ಅಧ್ಯಕ್ಷರೆ, ನಾನು ಈ ಪ್ರಸ್ತಾವನೆಯನ್ನು ಅನುಮೋದಿಸುತ್ತೇನೆ.

ಪ್ರಸ್ತಾವನೆಯನ್ನು ಮಂಡಿಸಲಾಯಿತು

ಅಧ್ಯಕ್ಷರು:- ನಾನು ಇನ್ನೊಂದು ವಿಷಯವನ್ನು ಈ ಸದನಕ್ಕೆ ತಿಳಿಸಬಯಸುತ್ತೇನೆ, ಈ ಮೊದಲ ಅಧಿವೇಶನಕ್ಕೆ ಸಂಬಂಧಪಟ್ಟಂತೆ ಮಾತ್ರ ಪ್ರತಿ ದಿನ ಮಧ್ಯಾಹ್ನ 1-30 ರಿಂದ 2-30 ರವರೆಗೆ ಭೋಜನ ವಿರಾಮವೆಂದು ನಿಗಧಿ ಮಾಡಲಾಗಿದೆ. ಈಗ ಮಾನ್ಯ ನಂಜಯ್ಯನವರ್‌ರವರೆ, ನೀವು ಮಾತನಾಡಿ.